1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಸಾಗರ

ಸಿ.ಸಿ ನಂ. 1659/2025

| | |
|---|---|
| ಸಾಕ್ಷಿದಾರರ ಹೆಸರು | : ಪ್ರವೀಣ್ ಕುಮಾರ್ |
| ತಂದೆಯ/ಗಂಡನ ಹೆಸರು | : ಎಸ್ ವೀರಪ್ಪ |
| ವಯಸ್ಸು | : 42 |
| ಉದ್ಯೋಗ | : ಪಿ ಐ |
| ವಾಸಃ | : ಶಿರಾ, ತುಮಕೂರು |

ಸಿ.ಡಬ್ಲ್ಯೂ- 19 ಪಿ.ಡಬ್ಲ್ಯೂ- 6

ದಿನಾಂಕ 04.03.2026 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.

ಮುಖ್ಯ ವಿಚಾರಣೆ:- ಸ.ಸ. ಅ ರವರಿಂದಃ

ನಾನು 06.05.2022 ರಿಂದ 07.08.2023 ರವರೆಗೆ ಸಾಗರದ ಗ್ರಾಮಾಂತರ ಠಾಣೆಯಲ್ಲಿ ಪಿ ಎಐ ಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ .

ಚಾಸ-18 ರವರಿಂದ ಕಡತವನ್ನು ಸ್ವೀಕರಿಸಿ ಚಾಸ-4 ಮತ್ತು 5 ರವರ ಸಮಕ್ಷಮ ಚಾಸಾ-2 ರವರು ತೋರಿಸಿದ ಸ್ಥಳದಲ್ಲಿ ಸ್ಥಳ ಮಹಜರ್ ಮಾಡಿ ಕಚ್ಚಾ ನಕಾಶೆ ತಯಾರಿಸಿರುತ್ತೇನೆ. ಅದೇ ದಿನ ಚಾಸಾ-4 ಮತ್ತು 5 ರವರ ಸಮಕ್ಷಮದಲ್ಲಿ ಅಪಘಾತಕ್ಕೊಳಗಾದ ವಾಹನದ ಅಮಾನತ್ತು ಪಂಚನಾಮೆಯನ್ನು ಜರುಗಿಸಿರುತ್ತೇನೆ. ಚಾಸಾ-18 ರವರಿಂದ ಶವ ತನಿಖಾ ವರದಿಯನ್ನು ಸ್ವೀಕರಿಸಿರುತ್ತೇನೆ. ಕಲಂ 133 ಐ ಎಂ ವಿ ನೋಟೀಸು ನೀಡಿ ಚಾಸಾ-12 ರವರಿಂದ ಮರು ಉತ್ತರ ಪಡೆದಿರುತ್ತೇನೆ. ಆರೋಪಿ ಯನ್ನು ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಇಂಡ್ಮಿನಿಟಿ ಬಾಂಡ್ ಪಡೆದು ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಐ ಎಂ ವಿ ವರದಿ, ಪಿ ಎಂ ವರದಿಯನ್ನು ಪಡೆದುಕೊಂಡಿರುತ್ತೇನೆ. ಚಾಸಾ-2, 3 ಮತ್ತು ಚಾಸಾ-12 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಚಾಸಾ-14 ರವರಿಂದ 65(ಬಿ) ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಆರೋಪಿಯ ವಿರುದ್ಧ ಆರೋಪ ಸಾಬೀತಾ

ಹಿನ್ನೆಲೆಯಲ್ಲಿ ಅಂತಿಮ ದೋಷಾರೋಪಣೆ ಪಟ್ಟಿಯನ್ನು ತಯಾರಿಸಿ ಅದನ್ನು ಮೇಲಾಧಿಕಾರಿಗಳಿಗೆ ಹಾಗೂ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿ ಕೊಂಡಿರುತ್ತೇನೆ.

ಪಿ ಎಂ ವರದಿಯನ್ನು ನಿಪಿ–8 ಎಂದು ಐ ಎಂವಿ ವರದಿಯನ್ನು ನಿಪಿ–9 ಎಂದು, ಇಂಡೆಮಿನಿಟಿ ಬಾಂಡ್ ಅನ್ನು ನಿಪಿ–10 ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿಪಿ 2 ಮತ್ತು 3 ನ್ನು ತೋರಿಸಲಾಗಿ ಅದರಲ್ಲಿ ಇರುವ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸದರಿ ಸಹಿಗಳನ್ನು ನಿಪಿ 2 (ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು.

ಇಂದು ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

ಪಾಟೀ ಸವಾಲು :– ಆರೋಪಿ ಪರ ಶ್ರೀ. ಡಿ ಎಂ ಆರ್ ವಕೀಲರಿಂದಃ–

ಚಾಸ–4 ಮತ್ತು 5 ರವರ ಸಮಕ್ಷಮ ಚಾಸಾ–2 ರವರು ತೋರಿಸಿದ ಸ್ಥಳದಲ್ಲಿ ಸ್ಥಳ ಯಾವುದೇ ಮಹಜರ್ ಅನ್ನಾಗಲೀ, ಕಚ್ಚಾ ನಕಾಶೆಯನ್ನಾಗಲೀ ತಯಾರಿಸಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ದಿನ ಚಾಸಾ–4 ಮತ್ತು 5 ರವರ ಸಮಕ್ಷಮದಲ್ಲಿ ಅಪಘಾತಕ್ಕೊಳಗಾದ ವಾಹನದ ಅಮಾನತ್ತು ಪಂಚನಾಮೆಯನ್ನು ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ–18 ರವರು ಕಛೇರಿಯಲ್ಲೇ ಕುಳಿತು ಶವ ತನಿಖಾ ವರದಿಯನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಕಲಂ 133 ಐ ಎಂ ವಿ ನೋಟೀಸು ನೀಡಿದ್ದಾಗಲೀ, ಚಾಸಾ–12 ರವರಿಂದ ಮರು ಉತ್ತರ ಪಡೆದಿದ್ದಾಗಲೀ ಸುಳ್ಳು ಎಂದರೆ ಸರಿಯಲ್ಲ. ಇಂಡ್ಮಿನಿಟಿ ಬಾಂಡ್ ಪಡೆದದ್ದಾಗಲೀ, ವಾಹನವನ್ನು ಬಿಡುಗಡೆ ಮಾಡಿದ್ದಾಗಲೀ ಸುಳ್ಳು ಎಂದರೆ ಸರಿಯಲ್ಲ. ಕಛೇರಿಯಲ್ಲೆ ಕುಳಿತು ಹೇಳಿಕೆಗಳನ್ನು ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಚಾಸಾ–2, 3 ಮತ್ತು ಚಾಸಾ–12 ರವರು ನನ್ನ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ವಿರುದ್ಧ ಯಾವುದೇ ಅರೋಪ ಸಾಬೀತಾಗದೇ ಇದ್ದರು ಆರೋಪಿ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದೆರ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.

1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಸಾಗರ

ಸಿ.ಸಿ ನಂ. 1659/2025

ಸಾಕ್ಷಿದಾರರ ಹೆಸರು : ದೂದಾ ನಾಯ್ಕ

ತಂದೆಯ/ಗಂಡನ ಹೆಸರು : ರೂಪ್ಲಾನಾಯ್ಕ

ವಯಸ್ಸು : 46 ವರ್ಷ

ಉದ್ಯೋಗ : ಹೆಚ್ ಸಿ

ವಾಸಃ : ಆನಂದಪುರ

ಸಿ.ಡಬ್ಲ್ಯೂ- 17 ಪಿ.ಡಬ್ಲ್ಯೂ- 4

ದಿನಾಂಕ 04.03.2026 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.

ಮುಖ್ಯ ವಿಚಾರಣೆ:- ಸ.ಸ. ಅ ರವರಿಂದಃ

ನಾನು 2019 ರಿಂದ 2025 ಜೂನ್ ವರೆಗೆ ಸಾಗರದ ಗ್ರಾಮಾಂತರ ಠಾಣೆಯಲ್ಲಿ ಹೆಚ್ ಸಿ ಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ .

ದಿಃ 15.03.2023 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಚಾಸಾ 1 ರವರು ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿ ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೂ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಚಾಸಾ-13 ರವರಿಂದ ವರದಿಯನ್ನು ಸ್ವೀಕರಿಸಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-18 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಗೆ ನಿಪಿ 1 ನ್ನು ತೋರಿಸಲಾಗಿ ಅದರಲ್ಲಿ ಇರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸದರಿ ಸಹಿಯನ್ನು ನಿಪಿ 1 (ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲು :- ಆರೋಪಿ ಪರ ಶ್ರೀ. ಡಿ ಎಂ ಆರ್ ವಕೀಲರಿಂದಃ-

ನಾನು ಚಾಸ-1 ರವರು ನೀಡಿದ ಸುಳ್ಳು ದೂರನ್ನು ಸ್ವೀಕರಿ ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಬರೆದ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.ನಾನು ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.

1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಸಾಗರ

ಸಿ.ಸಿ ನಂ. 1659/2025

ಸಾಕ್ಷಿದಾರರ ಹೆಸರು : ದೇವಿದಾಸ ಡಿ ನಾಯ್ಕ

ತಂದೆಯ/ಗಂಡನ ಹೆಸರು : ದೇವಪ್ಪ ನಾಯ್ಕ

ವಯಸ್ಸು : 51 ವರ್ಷ

ಉದ್ಯೋಗ : ಎ ಎಸ್ ಐ

ವಾಸಃ : ಆನಂದಪುರ

ಸಿ.ಡಬ್ಲ್ಯೂ-18 ಪಿ.ಡಬ್ಲ್ಯೂ-5

ದಿನಾಂಕ 04.03.2026 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.

ಮುಖ್ಯ ವಿಚಾರಣೆ:- ಸ.ಸ. ಅ ರವರಿಂದಃ

ನಾನು ಜನವರಿ 2022 ರಿಂದ ಏಪ್ರಿಲ್ 2023 ರ ವರೆಗೆ ಸಾಗರದ ಗ್ರಾಮಾಂತರ ಠಾಣೆಯಲ್ಲಿ ಎ ಎಸ್ಐ ಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ .

ದಿಃ 15.03.2023 ರಂದು ಚಾಸಾ-17 ರವರಿಂದ ಚಾಸಾ-19 ರವರ ಮೌಖಿಕ ಆದೇಶದ ಮೇರೆಗೆ ಕಡತವನ್ನು ಸ್ವೀಕರಿಸಿರುತ್ತೇನೆ. ಚಾಸಾ-14 ರವರ ಜೊತೆ ಖಾಸಗಿ ವಾಹನದಲ್ಲಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಕ್ಕೆ ತಲುಪಿ ಶವಗಾರದಲ್ಲಿ ಶವ ತನಿಖಾ ವರದಿಯನ್ನು ತಯಾರಿಸಿ ಚಾಸಾ-19 ರವರಿಗೆ ವರದಿಯನ್ನು ನೀಡಿರುತ್ತೇನೆ.

ಶವ ತನಿಖಾ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಪಾಟೀ ಸವಾಲು :- ಆರೋಪಿ ಪರ ಶ್ರೀ. ಡಿ.ಎಂ.ಆರ್ ವಕೀಲರಿಂದಃ-

ಚಾಸಾ-14 ರವರ ಜೊತೆ ಖಾಸಗಿ ವಾಹನದಲ್ಲಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಕ್ಕೆ ಹೋಗಿದಾದ್ಗಲೀ, ಶವಗಾರದಲ್ಲಿ ಶವ ತನಿಖಾ ವರದಿಯನ್ನು ತಯಾರಿಸಿದ್ದಾಗಲೀ ಸುಳ್ಳು ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

1 ನೇ ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.